ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಮಾನ್ಯ ಸಭಾಧ್ಯಕ್ಷರವರು

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ ದಿನಾಂಕ : DATE: 22/02/2020

# ಶಾಸಕರ ಭವನಕ್ಕೂ ಮಾಧ್ಯಮ ನಿರ್ಬಂಧ

» ಎಂಎಲ್ಎಗಳಿಗೆ ಬೇಕಂತೆ ಏಕಾಂತ

» ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಆದೇಶ

ಬೆಂಗಳೂರು: ಶಾಸಕರ ಏಕಾಂತಕ್ಕೆ ಧಕ್ಕೆಯಾಗುತ್ತದೆ ಎಂಬ ನೆಪ ನೀಡಿ ಶಾಸಕರ ಭವನಕ್ಕೂ ಮಾಧ್ಯಮಗಳಿಗೆ ನಿರ್ಬಂಧ ವಿಧಿಸಿ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಆದೇಶ ಹೊರಡಿಸಿದ್ದಾರೆ.

ಕಾಗೇರಿ ಸ್ಪೀಕರ್ ಆಗಿ ನೇಮಕಗೊಂಡ ಕೂಡಲೇ ವಿಧಾನಸಭೆ ಅಧಿವೇಶನದ ಚಿತ್ರೀಕರಣವನ್ನು ಎಲ್ಲ ಮಾಧ್ಯಮಗಳಿಗೆ ನಿರ್ಬಂಧಿಸಿದ್ದರು. ಇದು ಸಾಕಷ್ಟು ಚರ್ಚೆಗೂ ಗ್ರಾಸವಾಗಿತ್ತು. ಪ್ರಜಾಪ್ರಭುತ್ವದ ಕಗ್ಗೊಲೆ ಎಂದು ಪ್ರತಿಪಕ್ಷಗಳು ಸ್ಪೀಕರ್ ನಡೆಯನ್ನು ತೀವ್ರವಾಗಿ ಟೀಕಿಸಿದ್ದವು. ಈಗ ಮತ್ತೊಂದು ಆದೇಶ ಹೊರಡಿಸಿರುವ ಸ್ಪೀಕರ್, ಶಾಸಕರು ತಮ್ಮ ಕ್ಷೇತ್ರದಿಂದ ಬೆಂಗಳೂರಿಗೆ ಬಂದು ಕೆಲಸ ಮುಗಿಸಿ ಭವನದಲ್ಲಿ ವಿಶ್ರಾಂತಿ ಪಡೆಯುತ್ತಾರೆ. ಆ ವೇಳೆ ಪತ್ರಕರ್ತರು ಶಾಸಕರನ್ನು ಭೇಟಿಯಾಗಲು ಬಂದರೆ ಅವರ ಖಾಸಗೀತನಕ್ಕೆ ಅಡ್ಡಿಯಾಗುತ್ತದೆ. ಒಂದು ವೇಳೆ ಮಾಧ್ಯಮಗಳಿಗೆ ಸಂದರ್ಶನ ನೀಡಬೇಕಾದರೆ ಶಾಸಕರೇ ಶಾಸಕರ ಭವನದ ಗೇಟಿನ ಹೊರಗೆ ಬಂದು ಭೇಟಿಯಾಗಬಹುದು ಎಂದು ಸ್ಪಷ್ಟ ಆದೇಶ ನೀಡಿದ್ದಾರೆ.

2